ಸಿಬ್ಬಂದಿಯನ್ನು ಆಸ್ತಿಪಾಸ್ತಿ ವಿಲೇವಾರಿ ಮಾಡುವವರಿಗೆ ಮರುನೇಮಕಾತಿ ಆಧಾರದ ಮೇಲೆ ಮುಂದುವರಿಸಿಕೊಂಡಿರುತ್ತಾರೆ. 28 ಖಾಸಗಿ ಸುರಕ್ಷತಾ ಸಿಬ್ಬಂದಿಯನ್ನು ಕಂಟ್ರಾಕ್ಟ್ ಆಧಾರದ ಮೇಲೆ ಉಪಯೋಗಿಸಿಕೊಳ್ಳಲಾಗಿರುತ್ತದೆ. ಈ ಹಿಂದೆ ಇದ್ದ ಸಿಬ್ಬಂದಿಯಲ್ಲಿ 54 ಲಿಪಿಕ ಸಿಬ್ಬಂದಿಯವರು ತಮಗೆ ಮರು ಉದ್ಯೋಗ ಕಲ್ಪಿಸಿಕೊಡಬೇಕೆಂದು ಮನವಿ ಸಲ್ಲಿಸಿದ್ದು, ಕಾನೂನು ರೀತ್ಯ ಅವರಿಗೆ ಉದ್ಯೋಗ ಕಲ್ಪಿಸುವ ಸಾಧ್ಯತೆ ಇಲ್ಲದೆ ಇರುವುದರಿಂದ ಅನುಕಂಪದ ಆಧಾರದ ಮೇಲೆ ಸಾಧ್ಯವಿದ್ದಲ್ಲಿ, ಕೆ.ಎಸ್.ಆರ್.ಟಿ.ಸಿ.ಯಲ್ಲಿ ವಿವಿಧ ಹುದ್ದೆಗಳಿಗೆ ಭರ್ತಿ ಮಾಡಿಕೊಳ್ಳಲು ಶಿಫಾರಸ್ಸು ಮಾಡಲು ಯೋಚಿಸಲಾಗಿದೆ. ಅದರಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

ಮಾಂಗಲ್ಯ ಭಾಗ್ಯ ಯೋಜನೆ

1494(2118)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ-ಗ್ರಾಮಿಣ): ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1997-98ನೇ ಸಾಲಿನಲ್ಲಿ ಮಾಂಗಲ್ಯ ಭಾಗ್ಯ ಯೋಜನೆಯಡಿಯಲ್ಲಿ ಧಾರವಾಡ ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು?

ಆ) ಈ ಯೋಜನೆಯಡಿ ಪ್ರಯೋಜನ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು?

ಇ) ಈ ಯೋಜನೆಯಡಿ ಪ್ರಯೋಜನ ಪಡೆಯಲು ಒದಗಿಸಬೇಕಾದ ದಾಖಲೆಗಳು ಯಾವುವು?

ಶ್ರೀ ಮಾಲೀಕಯ್ಯ ವಿ.ಗುತ್ತೇದಾರ್ (ಹಿಂದುಳಿ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು):

ಅ ಮತ್ತು ಆ) 1997-98ನೇ ಸಾಲಿನಲ್ಲಿ ಮಾಂಗಲ್ಯಭಾಗ್ಯ ಯೋಜನೆಯು ಅನುಷ್ಠಾನವಾಗಿರುವುದಿಲ್ಲ.

ಇ) ದಿನಾಂಕ: 12-1-99ರ ಆದೇಶದಲ್ಲಿ ಈ ಕಾರ್ಯ ಕ್ರಮವನ್ನು 1998-99ರಿಂದ ಜಾರಿಗೊಳಿಸಲಾಗುತ್ತಿದೆ. ಈ ಕೆಳಂಕಂಡ ದಾಖಲಾತಿಗಳನ್ನು ಅಭ್ಯರ್ಥಿಯು ಒದಗಿಸಬೇಕಾಗಿರುತ್ತದೆ:-

1) ಸೌಲಭ್ಯ ಪಡೆಯುವ ಅರ್ಜಿ

2) ಜಾತಿ: ಆದಾಯ ಪ್ರಮಾಣ ಪತ್ರ

3) ವಾಸಸ್ಥಳದ ಬಗ್ಗೆ ಧೃಢೀಕರಣಪತ್ರ

4) ವಿವಾಹಕ್ಕೆ ಸಂಬಂಧಿಸಿದ ದಾಖಲೆ: ಲಗ್ನಪತ್ರಿಕೆ

5) ಜನ್ಮ ದಿನಾಂಕದ ದೃಢೀಕರಣ ಪತ್ರ

ನಗರ ಭೂ ಪರಿಮಿತಿ ಕಾನೂನು ರದ್ದತಿ.

1495(2119)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಗರ ಭೂ ಪರಿಮಿತಿ ಕಾನೂನನ್ನು (ಅರ್ಬನ್ ಲ್ಯಾಂಡ್ ಸೀಲಿಂಗ್ ಮತ್ತು ರೆಗ್ಯೂಲರೈಸೇಷನ್ ಆಕ್ಟ್) ಕೇಂದ್ರ ಸರ್ಕಾರ ರದ್ದುಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಈ ಬಗ್ಗೆ ರಾಜ್ಯ ಸರ್ಕಾರದ ಸ್ಪಷ್ಟ ನಿಲುವೇನು?

ಶ್ರೀ ಎಂ.ಎಸ್.ಪಾಟೀಲ್ (ನಗರಾಭಿವೃದ್ಧಿ ಸಚಿವರು):

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಈ ಕುರಿತು ಕ್ರಮ ತೆಗೆದುಕೊಳ್ಳುವ ಬಗ್ಗೆ ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಸಣ್ಣ ಮತ್ತು ಮಧ್ಯಮ ಪಟ್ಟಣ ಅಭಿವೃದ್ಧಿ ಯೋಜನೆ.

1496(2084)

ಡಾ: ಎಂ.ಪಿ.ಕರ್ಕಿ (ಕುಮಟಾ): ಮಾನ್ಯ ಪೌರಾಡಳಿತ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?